सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ಕಟ್ಟಡ (ಹಿಂಭಾಗ), ನಂ. 8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

## ರಾಜ್ಯ ಚುನಾವಣಾ ಆಯೋಗದ ನಡವಳಿ.

**ವಿಷಯ:** ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ-2019

**ಓದಲಾಗಿದೆ:** (1). ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ:76:ಇಯುಬಿ:2019 ದಿನಾಂಕ:02-05-2019

(2). ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:21239/2019 ಮಧ್ಯಂತರ ಆದೇಶ ದಿ.08-05-2019

(3). ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ:76:ಇಯುಬಿ:2019 ದಿನಾಂಕ:09-05-2019

(4). ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ ಇವರ ಪತ್ರ ಸಂಖ್ಯೆ: ನಂ.ಚು(4)ಸಿಆರ್.19/2018-19 ದಿನಾಂಕ.09-05-2019

(5). ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ:76:ಇಯುಬಿ:2019 ದಿನಾಂಕ:09-05-2019

(6). ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:21239/2019 ಆದೇಶ ದಿ.13-05-2019

-0-0-0-

ಪ್ರಸ್ತಾವನೆ:-

ಕ್ರಮಸಂಖ್ಯೆ(1)ರಲ್ಲಿ ಓದಲಾದ ಆದೇಶದಲ್ಲಿ ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977ರ ನಿಯಮ 3(1) ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ ಆದೇಶದ ಅನುಬಂಧದಲ್ಲಿರುವ 63 (8 ನಗರಸಭೆಗಳು, 33 ಪುರಸಭೆಗಳು ಹಾಗೂ 22 ಪಟ್ಟಣ ಪಂಚಾಯಿತಿಗಳು) ನಗರ ಸ್ಥಳೀಯ ಸಂಸ್ಥೆಗಳಿಗೆ ಆದೇಶ ಸಂಖ್ಯೆ: ರಾಚುಆ:76:ಇಯುಬಿ:2019, ದಿನಾಂಕ: 02-05-2019 ರಂದು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿ ಚುನಾವಣೆಯನ್ನು ನಡೆಸಲು ಆದೇಶಿಸಿದೆ.

ಕ್ರಮಸಂಖ್ಯೆ(2)ರಲ್ಲಿ ಓದಲಾದ ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ನೆಲಮಂಗಲ ಪುರಸಭೆಗೆ ಸಂಬಂಧಪಟ್ಟಂತೆ **ರಿಟ್ ಅರ್ಜಿ ಸಂಖ್ಯೆ:21239/2019** ದಾಖಲಾಗಿದ್ದು, ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 08.05.2019ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ನೆಲಮಂಗಲ ಪುರಸಭೆಗೆ ಚುನಾವಣಾ ಪ್ರಕ್ರಿಯೆಯನ್ನು ನಾಲ್ಕುವಾರಗಳ ಕಾಲ ತಡೆಹಿಡಿಯುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳಿಗೆ ಆದೇಶಿಸಲಾಗಿದೆ.

ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಹಿನ್ನಲೆಯಲ್ಲಿ ಕ್ರಮಸಂಖ್ಯೆ(3)ರಲ್ಲಿ ಓದಲಾದ ರಾಜ್ಯ ಚುನಾವಣಾ ಆಯೋಗದ ಆದೇಶದಲ್ಲಿ ನೆಲಮಂಗಲ ಪುರಸಭೆಗೆ ಸಂಬಂಧಿಸಿದಂತೆ, ದಿನಾಂಕ:09.05.2019ರಿಂದ ಪ್ರಾರಂಭವಾಗಬೇಕಿದ್ದ ಚುನಾವಣಾ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿತ್ತು.

ಕ್ರಮಸಂಖ್ಯೆ(4)ರಲ್ಲಿ ಓದಲಾದ ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ ಇವರ ಪತ್ರದಲ್ಲಿ ಸೊರಬ ಪಟ್ಟಣ ಪಂಚಾಯಿತಿ ಸಂಬಂಧಪಟ್ಟಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ **ರಿಟ್ ಅರ್ಜಿ ಸಂಖ್ಯೆ:21241/2019** ದಾಖಲಾಗಿದ್ದು, ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 08.05.2019ರಂದು ನೀಡಿರುವ ಮಧ್ಯಂತರ ಆದೇಶದ ಬಗ್ಗೆ ಆಯೋಗದ ಮಾರ್ಗದರ್ಶನ ಕೋರಿರುತ್ತಾರೆ.

ಕ್ರಮಸಂಖ್ಯೆ(5)ರಲ್ಲಿ ಓದಲಾದ ರಾಜ್ಯ ಚುನಾವಣಾ ಆಯೋಗದ ಆದೇಶದಲ್ಲಿ ಮಾನ್ಯ ನ್ಯಾಯಾಲಯವು ಸೊರಬ ಪಟ್ಟಣ ಪಂಚಾಯಿತಿ ಚುನಾವಣಾ ಪ್ರಕ್ರಿಯೆಯನ್ನು ನಾಲ್ಕುವಾರಗಳ ಕಾಲ ತಡೆಹಿಡಿಯುವಂತೆ ಶಿವಮೊಗ್ಗ ಜಿಲ್ಲಾಧಿಕಾರಿಗಳಿಗೆ ಆದೇಶಿಸಿರುವುದರಿಂದ, ಸೊರಬ ಪಟ್ಟಣಪಂಚಾಯಿತಿಗೆ ಸಂಬಂಧಿಸಿದಂತೆ, ದಿನಾಂಕ:09.05.2019ರಿಂದ ಪ್ರಾರಂಭವಾಗಬೇಕಿದ್ದ ಚುನಾವಣಾ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿತ್ತು.

ಕ್ರಮಸಂಖ್ಯೆ(6)ರಲ್ಲಿ ಓದಲಾದ ಆದೇಶದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಮೇಲ್ಕಂಡ ಎರಡೂ ಪ್ರಕರಣಗಳನ್ನು ವಜಾಗೊಳಿಸಿ ಆದೇಶಿಸಿದೆ.

ಇದರಿಂದ ಮೇಲ್ಕಂಡ ಪ್ರಕರಣಗಳ ಬಗ್ಗೆ ನೀಡಿದ್ದ ಮಧ್ಯಂತರ ಆದೇಶಗಳು ವಜಾ ಆಗುವುದರಿಂದ, ಆಯೋಗವು ತಡೆಹಿಡಿಯಲಾಗಿದ್ದ, ನೆಲಮಂಗಲ ಪುರಸಭೆಗೆ ಮತ್ತು ಸೊರಬ ಪಟ್ಟಣ ಪಂಚಾಯಿತಿಗೆ ಚುನಾವಣೆಯನ್ನು ನಡೆಸಲು ಈ ಕೆಳಕಂಡಂತೆ ಆದೇಶಿಸಿದೆ.

## ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ:76:ಇಯುಬಿ:2019, ಬೆಂಗಳೂರು, ದಿನಾಂಕ: 13-05-2019

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಂತೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ಪುರಸಭೆಗೆ ಮತ್ತು ಶಿವಮೊಗ್ಗ ಜಿಲ್ಲೆ ಸೊರಬ ಪಟ್ಟಣ ಪಂಚಾಯಿತಿ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ಮೇಲ್ಕಂಡ ಪ್ರಕರಣಗಳು ದಿನಾಂಕ.13.05.2019ರ ಆದೇಶದಲ್ಲಿ ವಜಾಗೊಂಡಿರುವುದರಿಂದ, ಸದರಿ ಪ್ರಕರಣಗಳಲ್ಲಿ ನೀಡಿದ್ದ ಮಧ್ಯಂತರ ಆದೇಶಗಳೂ ಸಹ ವಜಾ ಆಗುವುದರಿಂದ, ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977ರ ನಿಯಮ 3(1) ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ **ನೆಲಮಂಗಲ ಪುರಸಭೆಯ ಎಲ್ಲಾ 23 ವಾರ್ಡ್‌ಗಳು ಹಾಗೂ ಸೊರಬ ಪಟ್ಟಣ ಪಂಚಾಯಿತಿಯ ಎಲ್ಲಾ 12 ವಾರ್ಡ್‌ಗಳಿಗೆ** ಈ ಕೆಳಕಂಡ ವೇಳಾಪಟ್ಟಿಯಂತೆ ಚುನಾವಣೆ ನಡೆಸಲು ಆದೇಶಿಸಿದೆ.

## ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 14-05-2019 (ಮಂಗಳವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 21-05-2019 (ಮಂಗಳವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 22-05-2019 (ಬುಧವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 24-05-2019 (ಶುಕ್ರವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | **01-06-2019** (ಶನಿವಾರ) |
| 6 | ಮರು ಮತದಾನ ಇದ್ದಲ್ಲಿ ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | 02-06-2019 (ಭಾನುವಾರ) |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | 03-06-2019 (ಸೋಮವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 03-06-2019 (ಸೋಮವಾರ) |

**ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು ತಕ್ಷಣದಿಂದ ಜಾರಿಗೆ ಬಂದಿದ್ದು ದಿನಾಂಕ: 03-06-2019 ರವರೆಗೆ ಜಾರಿಯಲ್ಲಿರುತ್ತದೆ.**

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 8ರ ಪ್ರಕಾರ ಚುನಾವಣೆ

ನಡೆಯುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಸಂಬಂಧಿಸಿದಂತೆ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ–1 ರಲ್ಲಿ ಹೊರಡಿಸತಕ್ಕದ್ದು. ಚುನಾವಣಾ ಅಧಿಸೂಚನೆಯ ಅನುಬಂಧದಲ್ಲಿ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಯ ಹೆಸರು, ವಾರ್ಡಿನ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವುದು. ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿ ಕಛೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ–ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ–1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು. ಚುನಾವಣಾ ವೇಳಾಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

**ಮುಂದುವರೆದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಪುರಸಭೆಗೆ ಮತ್ತು ಶಿವಮೊಗ್ಗ ಜಿಲ್ಲೆಯ ಸೊರಬ ಪಟ್ಟಣ ಪಂಚಾಯಿತಿಗೆ ಹೊಸ ವೇಳಾಪಟ್ಟಿಯಂತೆ ಚುನಾವಣೆ ನಡೆಸಲು ಆದೇಶಿಸಿರುವುದರಿಂದ, ಆಯೋಗದ ದಿನಾಂಕ: 02–05–2019ರ ಆದೇಶದಂತೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಚುನಾವಣೆ ನಡೆಯುತ್ತಿರುವ ಇತರೆ ನಗರ ಸ್ಥಳೀಯ ಸಂಸ್ಥೆಗಳ ಮತಗಳ ಎಣಿಕೆಯನ್ನು ಏಕಕಾಲದಲ್ಲಿ ನಡೆಸುವ ಉದ್ದೇಶದಿಂದ, ಮತಗಳ ಎಣಿಕೆಯನ್ನು ದಿನಾಂಕ: 31.05.2019 (ಶುಕ್ರವಾರ)ರ ಬದಲಿಗೆ ದಿನಾಂಕ: 03–06–2019 (ಸೋಮವಾರ) ರಂದು ನಡೆಸಲು ಆದೇಶಿಸಿದೆ. ಚುನಾವಣೆ ನೀತಿಸಂಹಿತೆಯು ದಿನಾಂಕ:03–06–2019 ರವರೆಗೆ ಆಯಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ. ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ.**

ಚುನಾವಣಾ ಪ್ರಕ್ರಿಯೆ ಜಾರಿಯಲ್ಲಿರುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

(ನಾಗರಾಜು. ಎನ್.ಆರ್.)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
13/05/19

**ಇವರಿಗೆ:**

**1.** ಜಿಲ್ಲಾಧಿಕಾರಿಗಳು ಬೆಂಗಳೂರು (ಗ್ರಾಮಾಂತರ) ಮತ್ತು ಶಿವಮೊಗ್ಗ ಜಿಲ್ಲೆ.
**2.**ಚುನಾವಣಾಧಿಕಾರಿಗಳು, ನೆಲಮಂಗಲ ಪುರಸಭೆ ಮತ್ತು ಸೊರಬ ಪಟ್ಟಣ ಪಂಚಾಯಿತಿ ಇವರಿಗೆ ಜಿಲ್ಲಾಧಿಕಾರಿಗಳ ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು